ಆ) ಹಾಗಿದ್ದಲ್ಲಿ, ಈ ಸತ್ಯಾಗ್ರಹ ಸೌಧವನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಈ ಐತಿಹಾಸಿಕ ಸತ್ಯಾಗ್ರಹಸೌಧದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಕೂಡಲೇ ಮೂಲಭೂತ ಸೌಲಭ್ಯಗಳನ್ನು ಮತ್ತು ಸದರಿ ಕಟ್ಟಡಕ್ಕೆ ಕಾಂಪೌಂಡ್ ಗೋಡೆಯನ್ನು ನಿರ್ಮಿಸಲು ಸರ್ಕಾರ ಅನುದಾನವನ್ನು ಬಿಡುಗಡೆ ಮಾಡಿದೆಯೇ;

ಉ) ಮಾಡಿದ್ದಲ್ಲಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಬಂದಿದೆ.

ಆ) ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 57 ಸ್ಥಾಪ್ರನಿ 2009, ದಿನಾಂಕ 15–3–2010ರಲ್ಲಿ ರೂ. 1.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿತ್ತು. ಆದರೆ ಆರ್ಥಿಕ ವರ್ಷದ ಅಂತ್ಯದಲ್ಲಿ ಹಣವನ್ನು ಖಜಾನೆಯಿಂದ ಡ್ರಾ ಮಾಡಲು ಸಾಧ್ಯವಾಗಿಲ್ಲದ ಕಾರಣ ರೂ.1.00 ಕೋಟಿಗಳನ್ನು ನವೀಕರಿಸಿ ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 56 ಸ್ಥಾಪ್ರನಿ 2010, ದಿನಾಂಕ 20–11–2010ರಲ್ಲಿ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದೆ.

ಇ) ಬಂದಿದೆ.

ಈ) ಕ್ರಮ ಕೈಗೊಳ್ಳಲಾಗುತ್ತದೆ.

ಉ) ಈಗಾಗಲೇ ಹಣ ಬಿಡುಗಡೆಯಾಗಿರುವುದರಿಂದ ಟೆಂಡರ್ ಕರೆದು ಕಾಮಗಾರಿಯನ್ನು ನಿರ್ವಹಿಸಲಾಗುವುದು.

ಜಮೀನುಗಳ ಪುನರ್ ಸರ್ವೆ ಕಾರ್ಯ

58(56) ಶ್ರೀಮತಿ ಕಲ್ಪನಾ ಸಿದ್ಧರಾಜು (ಮದ್ದೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ಆತಗೂರು ಹೋಬಳಿಯ ರೈತರ ಜಮೀನುಗಳ ಪುನರ್ ಸರ್ವೆ ಕಾರ್ಯ ಸಂಪೂರ್ಣವಾಗಿ ಮುಗಿದಿದೆಯೇ;

ಆ) ಹಾಗಿದ್ದಲ್ಲಿ, ಪುನರ್ ಸರ್ವೆ ಕಾರ್ಯದಲ್ಲಿ ರೈತರ ಜಮೀನಿನ ಅಳತೆ ಮತ್ತು ಹೆಸರುಗಳ ವ್ಯತ್ಯಾಸದಿಂದಾಗಿ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರಕ್ಕೆ ಎಷ್ಟು ಕಾಲಾವಕಾಶ ಬೇಕಾಗುತ್ತದೆ (ಪೂರ್ಣ ಮಾಹಿತಿ ನೀಡುವುದು)?

ಶ್ರೀ ಕರುಣಾಕರರೆಡ್ಡಿ (ಕಂದಾಯ ಸಚಿವರು)

ಅ) ಮದ್ದೂರು ತಾಲ್ಲೂಕು ಆತಗೂರು ಹೋಬಳಿಯ ರೈತರ ಜಮೀನುಗಳ ಪುನರ್ ಸರ್ವೆ ಕಾರ್ಯ ಮುಗಿದಿದ್ದು, ಜಿಲ್ಲಾಧಿಕಾರಿಗಳು ಮಂಡ್ಯ ಜಿಲ್ಲೆ, ಮಂಡ್ಯರವರ ಅಧಿಕೃತ ಜ್ಞಾಪನ ಸಂಖ್ಯೆ: ಸಿಎಲ್‌ಆರ್ 69/2003–04ರ ಮೇರೆಗೆ ದಿನಾಂಕ 9–2–2009ರಿಂದ ಆರ್.ಟಿ.ಸಿ. ಮತ್ತು ಇತರೆ ಭೂದಾಖಲೆಗಳನ್ನು ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ.

ಆ) ಬಂದಿದೆ.

ಇ) ಮದ್ದೂರು ತಾಲ್ಲೂಕು, ಆತಗೂರು ಹೋಬಳಿಯ ರೀಸರ್ವೆ ಕಾರ್ಯದಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಲು ಆಯುಕ್ತರು, ಭೂಮಾಪನ ಇಲಾಖೆ ಇವರು ದಿನಾಂಕ 18–5–2010ರಂದು ಸಭೆ ಕರೆದು ಚರ್ಚಿಸಿದ್ದು, ತಹಶೀಲ್ದಾರ್ ಕಛೇರಿ, ಮದ್ದೂರು ಇಲ್ಲಿಗೆ ಹೆಚ್ಚುವರಿಯಾಗಿ ಭೂಮಾಪಕರನ್ನು ನೇಮಕ ಮಾಡಲಾಗಿದೆ. ಈವರೆಗೆ ಒಟ್ಟು 2750 ವಿವಿಧ ಬಗೆಯ ಪ್ರಕರಣಗಳಲ್ಲಿ 571 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಉಳಿದ ಪ್ರಕರಣಗಳನ್ನು ಶೀಘ್ರ ವಿಲೇವಾರಿಗೊಳಿಸಲು ಗುರಿ ನಿಗದಿತ ವಿಲೇವಾರಿಗೆ ಸೂಚನೆ ನೀಡಲಾಗಿದೆ.

ಈ) ರೀಸರ್ವ್ ಕಾರ್ಯದಲ್ಲಿ ಆಗಿರುವ ಲೋಪದೋಷಗಳನ್ನು ನಿಯಮಾನುಸಾರ ಸುಮಾರು ಆರು ತಿಂಗಳಲ್ಲಿ ಇತ್ಯರ್ಥಗೊಳಿಸಲಾಗುವುದು.

ಅಕ್ರಮ–ಸಕ್ರಮ ಸಮಿತಿ ರಚನೆ

59(339) ಶ್ರೀಮತಿ ಖಾದರ್ ಯು.ಟಿ. (ಮಂಗಳೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?